ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕೆ.ಜಿ.ರಸ್ತೆ, ಬೆಂಗಳೂರು–560 009

ಸಂಖ್ಯೆ: CAC/04/ GPTR-2022/2022-23 ದಿನಾಂಕ:08-03-2023

## ಪ್ರಕಟಣೆ

2022ರ ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8ನೇ ತರಗತಿ) ವೃಂದದ ಹುದ್ದೆಗಳಿಗೆ ನೇಮಕಾತಿಗೆ (GPTR-2022) ಸಂಬಂಧಿಸಿದಂತೆ 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ:27–02–2023 ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು. ಸದರಿ 1:1 ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಹೊಸದಾಗಿ 13 ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಸದರಿ ಅಭ್ಯರ್ಥಿಗಳ ಮೂಲದಾಖಲೆಗಳ ಪರಿಶೀಲನೆಯನ್ನು ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ ರವರ ಕಛೇರಿ ಹಂತದಲ್ಲಿ ಕೈಗೊಳ್ಳಲಾಗಿದೆ.

ಮುಂದುವರೆದು ಸದರಿ 1:1 ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ ರವರ ಕಚೇರಿಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಸಲ್ಲಿಸುವಂತೆ ತಿಳಿಸಿ ದಿನಾಂಕ:01–03–2023 ರಿಂದ 04–03–2023 ರವರೆಗೆ ಕಾಲಾವಕಾಶ ನೀಡಲಾಗಿತ್ತು. ಅದರಂತೆ ಅಭ್ಯರ್ಥಿಗಳಿಂದ ಸಲ್ಲಿಕೆಯಾದ ಆಕ್ಷೇಪಣೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಅರ್ಹವಾದ ಆಕ್ಷೇಪಣೆಗಳನ್ನು ಪರಿಗಣಿಸಿ, ಆಯಾ ಜಿಲ್ಲಾ ಉಪನಿರ್ದೇಶಕರಿಂದ ದತ್ತಾಂಶದಲ್ಲಿ ಇಂದೀಕರಿಸಲಾಗಿರುತ್ತದೆ.

ಅದರಂತೆ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿ–2022ರ 1:1 ಮುಖ್ಯ ಆಯ್ಕೆ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್ https://schooleducation.kar.nic.inನಲ್ಲಿ ದಿನಾಂಕ:08–03–2023 ರಂದು ಪ್ರಕಟಿಸಿದೆ.

R. –

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ